ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	478
ಸದಸ್ಯರ ಹೆಸರು	:	ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
ಉತ್ತರಿಸುವ ದಿನಾಂಕ	:	22-07-2019
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಸಚಿವರು

ಕ್ರಸ	ವಿಷಯ	ಉತ್ತರ	Answer
ಅ)	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು	**Yes**
ಆ)	ಕುಮಾರನಾಯಕ್ ವರದಿಯಂತೆ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು;	ಆರ್ಥಿಕ ಇಲಾಖೆಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಶಿಕ್ಷಕರುಗಳಿಗೆ ಶ್ರೀ. ಕುಮಾರ್ ನಾಯಕ್ ರವರ ವರದಿಯನ್ವಯ ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿಲ್ಲವೆಂದು ಸಂಘದ ಪ್ರಸ್ತಾವನೆಗೆ ಹಿಂಬರಹ ನೀಡಿತ್ತು. ಆದರೇ, ಸಮರ್ಥನೀಯ ಕಾರಣಗಳೊಂದಿಗೆ ಪ್ರಸ್ತಾವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದೆ. ಆರ್ಥಿಕ ಇಲಾಖೆ ಸಹಮತಿ ನೀಡಿದ ನಂತರ ಈ ಸೌಲಭ್ಯ ಒದಗಿಸಲು ಅಗತ್ಯ ಕ್ರಮವಹಿಸಲಾಗುವುದು.	The Finance Department issued endorsement on the proposal of sanction of the additional increment to the teachers of Residential Schools as recommended Sri. Kumar Nayak report is not permissible as per Rules. But, the proposal was submitted with Sustainable reasons to the Finance Department. Action will be taken to provide this facility after the concurrence of Finance Department.

----------2

ಇ)	ಕ್ರೈಸ್ ಅಧೀನದಲ್ಲಿ ನಡೆಯುತ್ತಿದ್ದ ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿದಂತೆ ಬಿ.ಸಿ.ಎಂ. ಮೊರಾರ್ಜಿ /ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಿಲೀನಗೊಳಿಸಿ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು;	ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ.	The Proposal is under Process.
ಈ)	ಸದರಿ ಶಾಲೆಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿ ಇತರೆ ಇಲಾಖೆಯ ಸರ್ಕಾರಿ ನೌಕರರಿಗೆ ಮತ್ತು ಶಿಕ್ಷಕರಿಗೆ ಇರುವ ಸೌಲಭ್ಯಗಳಂತೆ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸಲು ಇನ್ನಾದರೂ ಸರ್ಕಾರ ಮುಂದಾಗುವುದೇ; ಮತ್ತು ಯಾವ ಕಾಲಮಿತಿಯಲ್ಲಿ ಸದರಿ ಪ್ರಕ್ರಯೆಯನ್ನು ಪೂರ್ಣಗೊಳಿಸಲಾಗುವುದು?		

ಸಕಇ 96 ಮೊದೇಶಾ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.